ಕರ್ನಾಟಕ ವಿಧಾನಸಭೆ

ಹತ್ತನೇ ವಿಧಾನ ಸಭೆ

(ಮೂರನೇ ಅಧಿವೇಶನ)

ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಕಾಂತರ ನಿಷೇಧ) (ಎರಡನೇ ತಿದ್ದುಪಡಿ) ವಿಧೇಯಕ, 1995.

(1995ರ ವಿಧಾನ ಸಭಾ ವಿಧೇಯಕ, ಸಂಖ್ಯೆ 30)

ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಕಾಂತರ ನಿಷೇಧ) ಅಧಿನಿಯಮ, 1987ನ್ನು ಮತ್ತಷ್ಟು ತಿದ್ದುಪಡಿ ಮಾಡುವ ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಕಾಂತರ ನಿಷೇಧ) ಅಧಿನಿಯಮ, 1987ನ್ನು (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 20) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಭಾರತ ಗಣರಾಜ್ಯದ ನಲವತ್ತಾರನೇ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ : (1) ಈ ಅಧಿನಿಯಮವನ್ನು ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಕಾಂತರ ನಿಷೇಧ) (ಎರಡನೇ ತಿದ್ದುಪಡಿ) ಅಧಿನಿಯಮ, 1995 ಎಂದು ಕರೆಯತಕ್ಕದ್ದು.

(2) ಇದು 1995ರ ಜೂನ್ ಐದನೇ ದಿನದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. 4ನೇ ಪ್ರಕರಣದ ತಿದ್ದುಪಡಿ : ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಕಾಂತರ ನಿಷೇಧ) ಅಧಿನಿಯಮ, 1987ರ (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 20) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮ ಎಂದು ಕರೆಯಲಾಗುವ) 4ನೇ ಪ್ರಕರಣದಲ್ಲಿ,

(1) (2)ನೇ ಉಪ-ಪ್ರಕರಣದಲ್ಲಿ,

(ಎ) (i)ನೇ ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ :

"(i) ಜಿಲ್ಲಾ ಪಂಚಾಯತಿಯ ಸಂದರ್ಭದಲ್ಲಿ, ರಾಜ್ಯ ಚುನಾವಣಾ ಕಮೀಷನರ್ಗೆ"

(ಬಿ) (iv)ನೇ ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:

"(iv) ತಾಲ್ಲೂಕು ಪಂಚಾಯತಿಯ ಸಂದರ್ಭದಲ್ಲಿ, ರಾಜ್ಯ ಚುನಾವಣಾ ಕಮೀಷನರ್ಗೆ"

(ಸಿ) ಪರಂತುಕವನ್ನು ಬಿಟ್ಟು ಬಿಡತಕ್ಕದ್ದು.

(2) ವಿವರಣೆಯಲ್ಲಿ (2)ನೇ ಖಂಡದ ನಂತರ ಈ ಮುಂದಿನದನ್ನು ಸೇರಿಸತಕ್ಕದ್ದು ಎಂದರೆ,

"(3) **ರಾಜ್ಯ ಚುನಾವಣಾ ಕಮೀಷನರ್**" ಎಂದರೆ ಕರ್ನಾಟಕ ಪಂಚಾಯತ್ ರಾಜ್ಯ ಅಧಿನಿಯಮ, 1993ರ 308ನೇ ಪ್ರಕರಣದ ಅಡಿಯಲ್ಲಿ ನೇಮಕನಾದ ರಾಜ್ಯ ಚುನಾವಣಾ ಕಮೀಷನರ್."

VIII F-15

3. ನಿರಸನ ಮತ್ತು ಉಳಿಸುವಿಕೆಗಳು : (1) ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ಅಧ್ಯಾದೇಶ, 1995 (1995ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 4) ಈ ಮೂಲಕ ನಿರಸಿತವಾಗಿದೆ.

(2) ಹಾಗೆ ನಿರಸನಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದಿಂದ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕೃತ್ಯವನ್ನು ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು, ಈ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದುದೆಂದು ಅಥವಾ ಕೈಗೊಳ್ಳಲಾದುದೆಂದು ಭಾವಿಸತಕ್ಕದ್ದು.

ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಯ ಸಂದರ್ಭದಲ್ಲಿ ಪಕ್ಷಾಂತರ ಆಧಾರದ ಮೇಲೆ ಅನರ್ಹತೆಯ ಪ್ರಶ್ನೆಯನ್ನು ನಿರ್ಧರಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಉಪಬಂಧ ಕಲ್ಪಿಸುವುದಕ್ಕಾಗಿ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ, 1987ನ್ನು ತಿದ್ದುಪಡಿ ಮಾಡುವುದು ಅಗತ್ಯವೆಂದು ಭಾವಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾದ್ದರಿಂದ ಮತ್ತು ಉಭಯ ಸದನಗಳೂ ಅಧಿವೇಶನದಲ್ಲಿಲ್ಲದಿದ್ದುದರಿಂದ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ಅಧ್ಯಾದೇಶ, 1995ನ್ನು ಪ್ರಖ್ಯಾಪಿಸಲಾಯಿತು.

ಆದ್ದರಿಂದ ಈ ವಿಧೇಯಕ.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡಾವಳಿ ನಿಯಮಗಳ ನಿಯಮ 80ರ ಉಪ-ನಿಯಮ (1)ರ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.

ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಯ ಸಂದರ್ಭದಲ್ಲಿ ಪಕ್ಷಾಂತರ ಆಧಾರದ ಮೇಲೆ ಅನರ್ಹತೆಯ ಪ್ರಶ್ನೆಯನ್ನು ನಿರ್ಧರಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಉಪಬಂಧ ಕಲ್ಪಿಸುವುದಕ್ಕಾಗಿ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ, 1987ನ್ನು ತಿದ್ದುಪಡಿ ಮಾಡುವುದು ಅಗತ್ಯವೆಂದು ಭಾವಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾದ್ದರಿಂದ ಮತ್ತು ಉಭಯ ಸದನಗಳೂ ಅಧಿವೇಶನದಲ್ಲಿಲ್ಲದಿದ್ದುದರಿಂದ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ಅಧ್ಯಾದೇಶ, 1995ನ್ನು ಪ್ರಖ್ಯಾಪಿಸಲಾಯಿತು.

ಈ ವಿಧೇಯಕವನ್ನು ಮೇಲಿನ ಅಧ್ಯಾದೇಶ ಬದಲು ಮಂಡಿಸಲಾಗಿದೆ.

ಅಧಿಕೃತ ಜ್ಞಾಪನ ಪತ್ರ

ಪ್ರಸ್ತಾವಿತ ಕ್ರಮದಿಂದಾಗಿ ಯಾವುದೇ ಹೆಚ್ಚಿನ ವೆಚ್ಚ ತಗಲುವುದಿಲ್ಲ.

ಎಂ.ಪಿ. ಪ್ರಕಾಶ್,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು.

ನಿಂ.ಹು. ಮುತ್ತಲಗೇರಿ,
ಕಾರ್ಯದರ್ಶಿ

ಅನುಬಂಧ

ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ಅಧಿನಿಯಮ 1987ರ (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 20) ಉದ್ದೃತ ಭಾಗ

xx xx xx

4. ಪಕ್ಷಾಂತರದ ಆಧಾರದ ಮೇಲೆ ಅನರ್ಹತೆಗೆ ಸಂಬಂಧಪಟ್ಟ ಪ್ರಶ್ನೆಯ ಬಗ್ಗೆ ತೀರ್ಮಾನ - (1) xx xx xx

(2) ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿಯು (1)ನೇ ಉಪ-ಪ್ರಕರಣದ ಅಡಿಯಲ್ಲಿ ಒಂದು ದೂರನ್ನು ಸ್ವೀಕರಿಸಿರುವಲ್ಲಿ, ಅಂಥ ದೂರನ್ನು ಸ್ವೀಕರಿಸಲಾದ ಇಪ್ಪತ್ತನಾಲ್ಕು ಗಂಟೆಗಳೊಳಗಾಗಿ, ಅದನ್ನು ತೀರ್ಮಾನಕ್ಕಾಗಿ,

(i) ಜಿಲ್ಲಾ ಪಂಚಾಯತಿಯ ಸಂದರ್ಭದಲ್ಲಿ, ಸರ್ಕಾರದ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅವರಿಗೆ

(ii) xx xx xx

(iii) xx xx xx

(iv) ತಾಲ್ಲೂಕು ಪಂಚಾಯಿತಿಯ ಸಂದರ್ಭದಲ್ಲಿ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ...

- ಕಳುಹಿಸತಕ್ಕದ್ದು

xx xx xx

ಪರಂತು ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ - ಇವರಿಗೆ ತೀರ್ಮಾನಕ್ಕಾಗಿ ಕಳುಹಿಸಲಾದ ದೂರಿನ ಸಂದರ್ಭದಲ್ಲಿ ಅವರು ಅಂಥ ಪ್ರಶ್ನೆಯನ್ನು ತೀರ್ಮಾನಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ ದರ್ಜೆಗೆ ಕಡಿಮೆಯಲ್ಲದ ಒಬ್ಬ ಅಧಿಕಾರಿಯನ್ನು ನಾಮ ನಿರ್ದೇಶಿಸಬಹುದು."